(ಎಂ.ಎಂ.ಬಾಟೆ)
ಸರ್ಕಾರದ ಅಧೀನ ಕಾರ್ಯದರ್ಶಿ–3,
ಸಮಾಜ ಕಲ್ಯಾಣ ಇಲಾಖೆ.

ಕರ್ನಾಟಕ ವಿಧಾನ ಸಭೆ

**355 ಶ್ರೀ.ಆರ್.ಧ್ರುವನಾರಾಯಣ್**
**ಸಮಾಜ ಕಲ್ಯಾಣ ಸಚಿವರು.**

**ಅ)** ಸಹಕಾರ ಸಂಸ್ಥೆಗಳಲ್ಲಿ ನೀಡಲಾಗುವ ಸಾಲದ ಬಡ್ಡಿದರ ಕೇವಲ ಶೇ.3 ರಷ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಹೌದು.

**ಆ)** ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ನೀಡಲಾಗುವ ಸಾಲದ ಬಡ್ಡಿ ದರ ಶೇ.6 ರಷ್ಟು ಇರುವುದು ನಿಜವೇ;

ನೇರಸಾಲ ಯೋಜನೆಯಡಿ ಅವಧಿಸಾಲ, ಭೂ ಒಡೆತನ ಯೋಜನೆಯಡಿ ಅವಧಿಸಾಲ, ಹಾಗೂ ಸಫಾಯಿ ಕರ್ಮಚಾರಿ ಪುನರ್ವಸತಿ ಯೋಜನೆಯಡಿ ರಾಷ್ಟ್ರೀಯ ಸಫಾಯಿ ಕರ್ಮಚಾರಿ ಹಣಕಾಸು ಅಭಿವೃದ್ಧಿ ನಿಗಮದಿಂದ ಪಡೆದ ಅವಧಿಸಾಲ ಇವುಗಳಿಗೆ ಶೇ.6 ರಷ್ಟು ಬಡ್ಡಿ ವಿಧಿಸಲಾಗುತ್ತಿದೆ.

**ಇ)** ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯುದಯ ದೃಷ್ಟಿಯಿಂದ ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ನೀಡಲಾಗುವ ಸಾಲದ ಬಡ್ಡಿ ದರವನ್ನು ಸಹಕಾರ ಸಂಸ್ಥೆಗಳಲ್ಲಿರುವಂತೆ ಶೇ.3ಕ್ಕೆ ನಿಗದಿಗೊಳಿಸಲು ಸರ್ಕಾರವು ಕ್ರಮ ಕೈಗೊಳ್ಳುವುದೇ?

ಅಂತಹ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.

**(ಸಕಇ 35 ಎಸ್‌ಡಿಸಿ 2009)**

(ಡಿ.ಸುಧಾಕರ್)
ಸಮಾಜ ಕಲ್ಯಾಣ ಸಚಿವರು.

ಕರ್ನಾಟಕ ವಿಧಾನ ಸಭೆ

**356 ಶ್ರೀ.ಆರ್.ಧ್ರುವನಾರಾಯಣ್**
**ಸಮಾಜ ಕಲ್ಯಾಣ ಸಚಿವರು.**

**ಅ)** ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಸಾಲ ಪಡೆದ ಫಲಾನುಭವಿಗಳಿಂದ ಬರಬೇಕಾದ ಬಾಕಿ ಎಷ್ಟು;

ಡಾ.ಬಿ.ಆರ್.ಅಂಬೇಡ್ಕರ್ ರೂ.28215.67 ಲಕ್ಷ ಅಭಿವೃದ್ಧಿ ನಿಗಮ ನಿಯಮಿತ. ಕರ್ನಾಟಕ ಪರಿಶಿಷ್ಟ ವರ್ಗಗಳ ರೂ.59.79 ಲಕ್ಷ ಅಭಿವೃದ್ಧಿ ನಿಗಮ ನಿಯಮಿತ

ಆ) ಉತ್ತರ ಪ್ರದೇಶ ಸರ್ಕಾರ ಡಿಸೆಂಬರ್, 2008ರಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದವರು ಎಸ್.ಪಿ/ಎಸ್.ಟಿ.ಅಭಿವೃದ್ಧಿ ನಿಗಮದಿಂದ ಪಡೆದ ಸಾಲವನ್ನು ಮನ್ನಾ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇಲ್ಲ.

ಇ) ಹಾಗಿದ್ದಲ್ಲಿ, ಉತ್ತರ ಪ್ರದೇಶ ಸರ್ಕಾರದ ಮಾದರಿಯಲ್ಲೇ ರಾಜ್ಯ ಸರ್ಕಾರವೂ ಸಹ ಪರಿಶಿಷ್ಟ ಜಾತಿ ಮತ್ತು ಪಂಗಡಗಳವರು ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಪಡೆದಿರುವ ಸಾಲವನ್ನು ಮನ್ನಾ ಮಾಡಲು ಕ್ರಮ ಕೈಗೊಳ್ಳುವುದೇ?

ಪ್ರಶ್ನೆ ಉದ್ಭವಿಸುವುದಿಲ್ಲ.

**(ಸಕಇ 34 ಎಸ್‌ಡಿಸಿ 2009)**

ಸಹಿ/-

**(ಡಿ.ಸುಧಾಕರ್)**

**ಸಮಾಜ ಕಲ್ಯಾಣ ಸಚಿವರು.**

**(ಕೆ.ಸುಬ್ಬಯ್ಯ)**

**ಸರ್ಕಾರದ ಅಧೀನ ಕಾರ್ಯದರ್ಶಿ-2**

**ಸಮಾಜ ಕಲ್ಯಾಣ ಇಲಾಖೆ.**

## ಕರ್ನಾಟಕ ವಿಧಾನ ಸಭೆ

**357 ಶ್ರೀ. ಧ್ರುವನಾರಾಯಣ.ಆರ್**

**ವೈದ್ಯಕೀಯ ಶಿಕ್ಷಣ ಸಚಿವರು.**

ಅ) ರಾಜ್ಯದಲ್ಲಿರುವ ಸರ್ಕಾರಿ ವೈದ್ಯಕೀಯ ಕಾಲೇಜುಗಳ ಸಂಖ್ಯೆ ಎಷ್ಟು;

10

ಆ) ಈ ಎಲ್ಲಾ ಕಾಲೇಜುಗಳಲ್ಲಿ ಲಭ್ಯವಿರುವ ಒಟ್ಟು ವೈದ್ಯಕೀಯ ಸೀಟುಗಳ ಸಂಖ್ಯೆ ಎಷ್ಟು;

1050

ಇ) ಚಾಮರಾಜನಗರ ಜಿಲ್ಲೆಯು ಅತ್ಯಂತ ಹಿಂದುಳಿದಿರುವುದರಿಂದ ಹಾಗೂ ಗಡಿ ಜಿಲ್ಲೆಯಾಗಿರುವುದರಿಂದ ಜಿಲ್ಲೆಯ ಅಭಿವದ್ಧಿ ದೃಷ್ಟಿಯಿಂದ ಸರ್ಕಾರವು ವೈದ್ಯಕೀಯ ಕಾಲೇಜು ಸ್ಥಾಪನೆಗೆ ಕ್ರಮ ಕೈಗೊಳ್ಳುವುದೇ?